ಕರ್ನಾಟಕ ಸರ್ಕಾರ

ಸಂ:ಎಸ್‌ಡಬ್ಲ್ಯುಎಲ್ 162 ಎಸ್‌ಎಸ್‌ಸಿ 92

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 6-4-93.

## ಸುತ್ತೋಲೆ

ಪರಿಶಿಷ್ಟ ಜಾತಿ : ಪರಿಶಿಷ್ಟ ವರ್ಗಗಳ ಜನರ ಮೇಲೆ ನಡೆಯುವ ದೌರ್ಜನ್ಯ ಪ್ರಕರಣಗಳು ಏರುಮುಖವಾಗುತ್ತಿದ್ದು ಇಂತಹ ಪ್ರಕರಣಗಳನ್ನು ತಡೆಗಟ್ಟುವ ಸಲುವಾಗಿ ಕೇಂದ್ರ ಸರ್ಕಾರವು ದಿನಾಂಕ:30-1-90ರಿಂದ ಪರಿಶಿಷ್ಟ ಜಾತಿ:ಪರಿಶಿಷ್ಟ ವರ್ಗಗಳ (ದೌರ್ಜನ್ಯ ನಿವಾರಣೆ) ಕಾಯ್ದೆ 1989 ಜಾರಿಗೆ ತಂದಿರುತ್ತದೆ. ಈ ಕಾಯ್ದೆ ಅನ್ವಯ ಪರಿಶಿಷ್ಟ ಜಾತಿ:ಪರಿಶಿಷ್ಟ ವರ್ಗದವರ ಮೇಲೆ ದೌರ್ಜನ್ಯ ನಡೆಸುವ ಅಪರಾಧಿ-ಗಳನ್ನು ಶಿಕ್ಷಿಸಲು ಮತ್ತು ದೌರ್ಜನ್ಯಕ್ಕೊಳಗಾದ ವ್ಯಕ್ತಿಗಳಿಗೆ ರಾಜ್ಯಾಂಗದತ್ತವಾದ ಹಕ್ಕುಗಳನ್ನು ಸಂರಕ್ಷಿಸಲು ವಿಸ್ತೃತ ಅವಕಾಶಗಳಿರುತ್ತದೆ. ಆದರೂ ಸಹ ದೌರ್ಜನ್ಯ ಪ್ರಕರಣಗಳು ದಿನೇ ದಿನೇ ಹೆಚ್ಚುತ್ತಿರುವುದು ಕಂಡು ಬರುತ್ತದೆ.

ದೌರ್ಜನ್ಯದ ಘಟನೆಗಳು ನಡೆಯದಂತೆ ಪ್ರತಿಯೊಂದು ಹಳ್ಳಿಗಳಲ್ಲಿ ಕೋಮು ಸಾಮರಸ್ಯ ವಾತಾವರಣ ಉಂಟು ಮಾಡುವುದು ಅವಶ್ಯಕವಾಗಿರುತ್ತದೆ. ಈ ದಿಸೆಯಲ್ಲಿ ಸರ್ಕಾರೇತರ ಸಂಸ್ಥೆ : ಸಂಸ್ಥೆಗಳು ಜನರಲ್ಲಿ ಕೋಮು ಸಾಮರಸ್ಯ ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸಬಹುದಾಗಿದೆ.

ಆದುದರಿಂದ ಪರಿಶಿಷ್ಟ ಜಾತಿ:ಪರಿಶಿಷ್ಟ ವರ್ಗದವರ ಮೇಲಿನ ದೌರ್ಜನ್ಯ ತಡೆಗಟ್ಟುವಲ್ಲಿ ಸರ್ಕಾರೇತರ ಸಂಸ್ಥೆ : ಸಂಸ್ಥೆಗಳ ಸಕ್ರಿಯ ಸಹಕಾರ ಪಡೆಯುವಂತೆ ಮುಖ್ಯವಾಗಿ ಎಲ್ಲಾ ಜಿಲ್ಲಾ ಪೊಲೀಸ ಅಧಿಕಾರಿಗಳು: ಜಿಲ್ಲಾಧಿಕಾರಿಗಳು : ಎಲ್ಲ ತಾಲ್ಲೂಕಿನ ತಹಶೀಲ್ದಾರರುಗಳನ್ನು ಕೋರಲಾಗಿದೆ.

(ಇ. ಕೃಷ್ಣಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಮತ್ತು ಕಾರ್ಮಿಕ ಇಲಾಖೆ.

ಇವರಿಗೆ:

1) ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ,ಬೆಂಗಳೂರು,
2) ಪೊಲೀಸ ಮಹಾನಿರ್ದೇಶಕರು, ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯ, ಬೆಂಗಳೂರು,
3) ಎಲ್ಲಾ ಜಿಲ್ಲಾಧಿಕಾರಿಗಳು,
4) ಎಲ್ಲಾ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು,
5) ಎಲ್ಲಾ ತಾಲ್ಲೂಕಿನ ತಹಶೀಲ್ದಾರರು,
6) ಹೆಚ್ಚುವರಿ ಪ್ರತಿಗಳು : ಶಾಖಾ ರಕ್ಷಾ ಕಡತ:

ಎಸ್‌ಎಲ್‌ಆರ್.